ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 22-03-2021 ಪ್ರಶ್ನೆ ಸಂಖ್ಯೆ : 1589 (1885)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 22-03-2021

ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ವಿಷಯ : ಆರ್ಥಿಕ ಮಿತವ್ಯಯ ಆದೇಶದ ಸಡಿಲಿಕೆ ಕುರಿತು

(ಅ) ಅನುದಾನಿತ ಪ್ರಾಥಮಿಕ, ಪ್ರೌಢಶಾಲೆ ಹಾಗೂ ಪದವಿಪೂರ್ವ ಕಾಲೇಜುಗಳಲ್ಲಿ ಖಾಲಿ ಹುದ್ದೆ ಭರ್ತಿ ಮಾಡುವ ಬಗ್ಗೆ ಆರ್ಥಿಕ ಇಲಾಖೆಯು ಆರ್ಥಿಕ ಮಿತವ್ಯಯ ಆದೇಶ ಹೊರಡಿಸಿ ಹುದ್ದೆ ಭರ್ತಿ ಮಾಡುವುದನ್ನು ತಡೆಹಿಡಿಯಲಾಗಿದೆಯೇ; ಎಂದಿನಿಂದ ತಡೆಹಿಡಿಯಲಾಗಿದೆ ; (ಆದೇಶದ ಪ್ರತಿ ಒದಗಿಸುವುದು)

(ಆ) ಈ ಆದೇಶದಿಂದ ಅನುದಾನಿತ ಸಿಬ್ಬಂದಿಯವರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಈಗಾಗಲೇ ಆರ್ಥಿಕ ಇಲಾಖೆಯು ಅನುಮತಿ ನೀಡಿ ಹುದ್ದೆ ಭರ್ತಿ ಮಾಡಲು ಸಹ ಅನುಮತಿ ನೀಡಿರುವ ಕಡತಗಳಿಗೆ ವೇತನ ಒದಗಿಸಲು ಸರ್ಕಾರ ಮುಂದಾಗಿದೆಯೇ ;

(ಈ) ಈಗಾಗಲೇ ಆರ್ಥಿಕ ಇಲಾಖೆಯು ಅನುಮತಿ ನೀಡಿರುವ ಹುದ್ದೆಗಳಿಗೆ ಅನುದಾನ ಒದಗಿಸಲು ಇರುವ ಅಡಚಣೆಗಳೇನು;

(ಉ) ಆರ್ಥಿಕ ಮಿತವ್ಯಯದ ಆದೇಶವನ್ನು ಯಾವಾಗ ಹಿಂಪಡೆಯಲಾಗುವುದು ? (ಮಾಹಿತಿ ನೀಡುವುದು)